# ಬರಗಾಲ ಇದೆಯೆಂಬ ಭಯಬೇಡ ಉದ್ಯೋಗ ಖಾತ್ರಿ ಕೆಲಸ ಇದೆ

## ಎಪ್ರೀಲ್–1 ರಿಂದ ಉದ್ಯೋಗ ಖಾತ್ರಿ ಕೆಲಸ ಆರಂಭ ಕಾಯಕ ಬಂಧುಗಳ ತರಬೇತಿ ಕಾರ್ಯಾಗಾರದಲ್ಲಿ ಸಂತೋಷಕುಮಾರ ಪಾಟೀಲ್ ಹೇಳಿಕೆ




ನರಗುಂದ : ಬರಗಾಲವಿದೆಯೆಂದು ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಭಯಬೇಡ. ಎಪ್ರೀಲ್–1 ರಿಂದ ಉದ್ಯೋಗ ಖಾತ್ರಿ ಕೆಲಸ ಆರಂಭವಾಗುತ್ತಿದ್ದು, ಯೋಜನೆಯಡಿ ಅನೇಕ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಅವಕಾಶವಿದೆ. ಗ್ರಾಮೀಣ ಪ್ರದೇಶಗಳ ಕಡುಬಡವರಿಗೂ ಯೋಜನೆಯ ಸದುಪಯೋಗ ದೊರಕುವಂತಾಗಲಿ ಎಂದು ನರಗುಂದ ತಾಲೂಕು ಪಂಚಾಯತ ಸಹಾಯಕ ನಿರ್ದೇಶಕ (ಗ್ರಾಮೀಣ&ಉದ್ಯೋಗ) ಸಂತೋಷಕುಮಾರ್ ಪಾಟೀಲ ಅಭಿಪ್ರಾಯಪಟ್ಟರು.

ನಗರದ ತಾಲೂಕು ಪಂಚಾಯತ ಸಭಾಭವನದಲ್ಲಿ ಶುಕ್ರವಾರ ನಡೆದ ಪಿಡಿಓ, ಕಾಯಕಬಂಧು ಹಾಗೂ ನರೇಗಾ ಸಿಬ್ಬಂದಿಯ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬರಗಾಲದ ತೀವ್ರತೆಯಿಂದ ಕೆಲಸ ಸಿಗದಿರುವ ಆತಂಕದಲ್ಲಿರುವ ಗ್ರಾಮೀಣ ಪ್ರದೇಶ ಕೂಲಿಕಾರರಿಗೆ ನೆರವಾಗಲೆಂದು ಎಪ್ರೀಲ್–1 ರಿಂದ ನರೇಗಾ ಯೋಜನೆಯಡಿ ಸಮುದಾಯ ಕಾಮಗಾರಿಗಳನ್ನು ಆರಂಭಿಸಲಾಗುತ್ತಿದೆ. ಇದ್ದೂರಲ್ಲೇ ನರೇಗಾ ಕೆಲಸ ಕೊಡುತ್ತಿರುವುದು ಗ್ರಾಮೀಣ ಪ್ರದೇಶದ ಜನರ ಗುಳೆ ತಪ್ಪಿಸುವ ಕೆಲಸವಾಗಿದೆ. ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ನರೇಗಾ ಯೋಜನೆ ಮಹತ್ವದ ಪಾತ್ರವಹಿಸಿದೆ. ಯೋಜನೆಯಡಿ ವಾರ್ಷಿಕವಾಗಿ 100 ದಿನಗಳವರೆಗೆ ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕೆಲಸ ಸಿಗುವಂತಾಗಬೇಕು. ಈ ಮೂಲಕ ಗ್ರಾಮೀಣ ಪ್ರದೇಶದ ಮೂಲಭೂತ ಸಮಸ್ಯೆಗಳನ್ನು ನಿವಾರಿಸಲು ನರೇಗಾ ವರದಾನವಾಗಲಿದೆ. ನರೇಗಾ ಕೆಲಸಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರನ್ನು ಸೇರಿಸುವ ಕೆಲಸವಾಗಬೇಕೆಂದು ತರಬೇತಿಯಲ್ಲಿ ಭಾಗವಹಿಸಿದ್ದ ಕಾಯಕಬಂಧುಗಳಿಗೆ ಕಿವಿಮಾತು ಹೇಳಿದರು.

ಬೇಸಿಗೆ ಅವಧಿಯ 60 ದಿನಗಳ ಕಾಲ ನರೇಗಾ ಯೋಜನೆಯಡಿ ಕೆಲಸ ಮಾಡಿದ್ರೆ ಕೂಲಿಕಾರರಿಗೆ 18960 ರೂಪಾಯಿ ಸಿಗುತ್ತದೆ. ಕೂಲಿಕಾರರು ನರೇಗಾ ಯೋಜನೆಯಿಂದ ಬರುವ ಈ ಹಣವನ್ನು ಮುಂಗಾರಿನ ಕೃಷಿ ಭಿತ್ತನೆಯ ಕಾರ್ಯಕ್ಕೆ ಸದುಪಯೋಗಪಡಿಸಿಕೊಳ್ಳಲು ನೆರವಾಗುವುದು ಎಂದು ಅಭಿಪ್ರಾಯಪಟ್ಟರು.ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕಿ ಶ್ರೀಮತಿ ಕೃಷ್ಣಮ್ಮ ಹಾದಿಮನಿ ಅವರು ಮಾತನಾಡಿ, ನರೇಗಾ ಕೆಲಸದಲ್ಲಿ ಮಹಿಳೆಯರು ಸ್ವಯಂ ಪ್ರೇರಣೆಯಿಂದ ಭಾಗವಹಿಸುವಂತ್ತಾಗಬೇಕು. ಮಹಿಳಾ ಸ್ವ–ಸಹಾಯ ಸಂಘದ ಸದಸ್ಯರು ನರೇಗಾ ಯೋಜನೆಯಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣ ಹೆಚ್ಚಿಸಲು ಶ್ರಮವಹಿಸಬೇಕೆಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಮಾಹಿತಿ ಮತ್ತು ಶಿಕ್ಷಣ ಸಂಯೋಜಕ ಸುರೇಶ ಬಾಳಿಕಾಯಿ ಮಾತನಾಡಿ, ಕಾಯಕಬಂಧುಗಳು ಎಂದರೇ ಯಾರು? ಕಾಯಕಬಂಧುಗಳ ಪಾತ್ರ ಮತ್ತು ಜವಾಬ್ದಾರಿ ಕುರಿತು ತರಬೇತಿ ನೀಡಿದರು.

ಬೇಸಿಗೆ ಅವಧಿಯಲ್ಲಿ ರೈತರ ಹೊಲದಲ್ಲಿ ಯೋಜನೆಯಡಿ ನಿರ್ಮಿಸುವ ಕಂದಕಬದುಗಳ ನಿರ್ಮಾಣ ಮತ್ತು ಅನುಷ್ಟಾನ ಕುರಿತು ತಾಂತ್ರಿಕ ಸಂಯೋಜಕ ಹನಮಂತ ಡಂಬಳ ವಿಷಯ ಮಂಡಿಸಿದರು.

ತರಬೇತಿ ಕಾರ್ಯಾಗಾರವನ್ನು ಸಸಿಗೆ ನೀರೂಣಿಸುವ ಮೂಲಕ ಸಂತೋಷಕುಮಾರ್ ಪಾಟೀಲ್, ಸಹಾಯಕ ನಿರ್ದೇಶಕರು ಗ್ರಾಮೀಣ ಉದ್ಯೋಗ, ಆನಂದ ಭೋವಿ ಸಹಾಯಕ ನಿರ್ದೇಶಕರು ಅಕ್ಷರ ದಾಸೋಹ ತಾಲೂಕು ಪಂಚಾಯತ ನರಗುಂದ ಅವರು ಜಂಟಿಯಾಗಿ ಉದ್ಘಾಟಿಸಿದರು.

ತರಬೇತಿ ಕಾರ್ಯಾಗಾರದಲ್ಲಿ ನರಗುಂದ ತಾಲೂಕಿನ 13 ಗ್ರಾಮ ಪಂಚಾಯತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ನರೇಗಾ ಸಿಬ್ಬಂದಿ ವರ್ಗ, ಎಂಬಿಕೆ ಮತ್ತು ಎನ್.ಆರ್.ಎಲ್.ಎಂ ಸಿಬ್ಬಂದಿ ಹಾಜರಿದ್ದರು. ಎನ್.ಆರ್.ಎಲ್.ಎಂ ಸಂಯೋಜಕ ಲಕ್ಷ್ಮಣ ಪೂಜಾರ ನಿರೂಪಿಸಿದರು.

# ಕುಡಿಯುವ ನೀರಿನ ಪೂರೈಕೆ ಸಮಸ್ಯೆ, ತುರ್ತು ಸಭೆ ನಡೆಸಿದ ಕಾರ್ಯ ನಿರ್ವಾಹಕ ಅಧಿಕಾರಿ ರವಿ.ಎ.ಎನ್



ರೋಣ :– ತಾಲೂಕಿನ ಹೊಳೆಆಲೂರು ಹೋಬಳಿಯ ಭಾಗದ ಅಮರಗೋಳ,ಹೊಳೆ ಆಲೂರು, ಮೆಣಸಗಿ ಹಾಗೂ ಹೊಳೆ ಮಣ್ಣೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳ ಕುಡಿಯುವ ನೀರಿನ ಪೂರೈಕೆ ಸಮಸ್ಯೆ ಸಂಬಂಧ ತುರ್ತು ಸಭೆಯನ್ನು ಕಾರ್ಯ ನಿರ್ವಾಹಕ ಅಧಿಕಾರಿ ರೋಣ ಅವರ ಅಧ್ಯಕ್ಷತೆಯಲ್ಲಿ ಹೊಳೆ ಆಲೂರು ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ನಡೆಸಲಾಯಿತು. ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಕುಡಿಯುವ ನೀರಿನ ಪೂರೈಕೆ ನಿರ್ವಹಣೆ ಬಗ್ಗೆ ಸಮಗ್ರವಾಗಿ ಚರ್ಚಿಸಿ ಪರಿಹಾರ ಕಂಡು ಕೊಳ್ಳಲು ಇರುವ ಮಾರ್ಗಗಳ ಬಗ್ಗೆ ಸಮಾಲೋಚನೆ ನಡೆಸಲಾಯಿತು.ನೀರಗಂಟಿಗಳು ಸದ್ಯ ನೀರಿನ ಲಭ್ಯತೆಯ ಕೊರತೆ ಹಿನ್ನೆಲೆಯಲ್ಲಿ ಗ್ರಾಮದ ನಿವಾಸಿಗಳಿಗೆ ನೀರು ಮಿತ ಬಳಕೆ ಬಗ್ಗೆ ಮನವರಿಕೆ ಮಾಡಿ ಸರಿಯಾದ ರೀತಿಯಲ್ಲಿ ಕುಡಿಯುವ ನೀರಿನ ಪೂರೈಕೆ ಮತ್ತು ನಿರ್ವಹಣೆ ಮಾಡುವಂತೆ ತಿಳಿಸಲಾಯಿತು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ರೋಣ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಗದೀಶ್ ಬಿ ಮಡಿವಾಳರ ಅವರು ಈ ಭಾಗದ ಜನರ ಕುಡಿಯುವ ನೀರಿನ ಸಮಸ್ಯೆಗಳಿಗೆ ಇಲಾಖೆಯ ಕಡೆಯಿಂದ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳು ವುದಾಗಿ ಹೇಳಿದರು.ಆಃಔಖಿ ಎಂಡಿ ದೇವರಾಜ್ ದೇಸಾಯಿ ಅವರು ಮಾತನಾಡಿ ಕೊನೆಯ ಭಾಗದ ಗ್ರಾಮಗಳಿಗೆ ಸಮರ್ಪಕವಾಗಿ ನೀರು ಒದಗಿಸಲು ಅಗತ್ಯ ಕ್ರಮ ಜರೂರಾಗಿ ಕೈಗೊಂಡು ಸ್ಥಳೀಯ ಆಡಳಿತಕ್ಕೆ ಸಹಕಾರ ನೀಡುವುದಾಗಿ ಹೇಳಿದರು.ಸಂಬಂಧ ಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ಪಿಡಿಓ ಅವರು ಭಾಗವಹಿಸಿ ತಮ್ಮ ತಮ್ಮ ಭಾಗದ ಕುಡಿಯುವ ನೀರಿನ ಪೂರೈಕೆ ನಿರ್ವಹಣೆ ಸಮಸ್ಯೆ ಬಗ್ಗೆ ಮಾಹಿತಿ ನೀಡಿದರು. ಎಲ್ಲಾ ಗ್ರಾಮ ಅಭಿವೃದ್ಧಿ ಅಧಿಕಾರಿಗಳು ಹಾಗೂ ಎಲ್ಲಾ ಪಂಚಾಯತಿಗಳ ನೀರಗಂಟಿಗಳು ಹಾಜರಿದ್ದರು.

# ಪುರುಷರಷ್ಟೇ ಮಹಿಳೆಯರೂ ಸಮಾನರು : ಪೂಜ್ಯ ಶಾಂತಲಿಂಗ ಶ್ರೀಗಳು



ಗದಗ : ಬಸವಾದಿ ಶರಣರ ಕಾಲದಲ್ಲಿ ನೂರಾರು ಶರಣೆಯರು ವಚನಕಾರ್ತಿಯರಾಗಿದ್ದರು. ಪುರುಷರಷ್ಟೇ ಮಹಿಳೆಯರೂ ಸಮಾನರು ಎಂಬ ತತ್ತ್ವಸಿದ್ಧಾಂತ ಬಸವಾದಿ ಶಿವಶರಣರ ಕಾಲದಿಂದಲೂ ಬಂದಿದೆ ಎಂದು ಭೈರನಹಟ್ಟಿಯ ಪೂಜ್ಯ ಶ್ರೀ ಶಾಂತಲಿಂಗ ಸ್ವಾಮಿಗಳು ಹೇಳಿದರು. ಲಿಂಗಾಯತ ಪ್ರಗತಿಶೀಲ ಸಂಘದ 2685ನೆಯ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಪೂಜ್ಯ ಶ್ರೀ ಶಾಂತಲಿಂಗ ಶ್ರೀಗಳು, 12 ನೇ ಶತಮಾನದಲ್ಲಿ ಎಲ್ಲಾ ಶರಣೆಯರು ಅನುಭವ ಮಂಟಪದಲ್ಲಿ ಪಾಲ್ಗೊಳ್ಳುತ್ತಿದ್ದರು. ಮೊಟ್ಟಮೊದಲ ಕವಯತ್ರಿ ಅಕ್ಕಮಹಾದೇವಿ ಆಗಿದ್ದರು. ಬಸವಾದಿ ಶಿವಶರಣರ ನಂತರ ಕೆಲವು ಕಾಲ ಸ್ತಬ್ಧವಾಗಿದ್ದ ವಚನಸಾಹಿತ್ಯವನ್ನು 15 ನೇ ಶತಮಾನದಲ್ಲಿ ತೋಂಟದ ಸಿದ್ಧಲಿಂಗ ಶಿವಯೋಗಿಗಳು ಮುಂದುವರೆಸಿಕೊಂಡು ಬಂದರು ಎಂದು ಮಾತನಾಡಿದರು.

ಮಹಿಳೆ : ಸಮಸ್ಯೆ–ಸವಾಲುಗಳು ಕುರಿತು ಸಾವಿತ್ರಿ ಮುಜುಮದಾರ, ಸಾಮಾಜಿಕ ಕಾರ್ಯಕರ್ತರು, ಸಾಹಿತಿ, ಚಿಂತಕರು ಕೊಪ್ಪಳ ಅವರು ಉಪನ್ಯಾಸ ನೀಡಿ, ಮಹಿಳೆಯರು ತಮ್ಮ ಅಸ್ತಿತ್ವಕ್ಕಾಗಿ, ಶಿಕ್ಷಣಕ್ಕಾಗಿ, ಹಕ್ಕುಗಳಿಗಾಗಿ, ಮತದಾನಕ್ಕಾಗಿ ಅನೇಕ ಹೋರಾಟಗಳಿಂದ ಪಡೆದಿರುವ ಮಹಿಳಾ ದಿನಾಚರಣೆ ಒಂದು ದಿನಕ್ಕೆ ಸೀಮಿತವಲ್ಲ. ಪ್ರತಿದಿನವೂ ಮಹಿಳೆಯರನ್ನು ಗೌರವಿಸಬೇಕು, ಆರಾದಿಸಬೇಕು, ಸ್ಮರಿಸಬೇಕು ಎಂದು ತಿಳಿಸಿದರು. ಮಹಿಳೆಗೂ, ಮಹಿಳಾ ಜೀವನಕ್ಕೂ, ಬದುಕಿಗೂ, ಸ್ವಾತಂತ್ರ್ಯಕ್ಕೂ 12 ನೇ ಶತಮಾನ ಬಹಳ ಮುಖ್ಯವಾಗಿದೆ. 12 ನೇ ಶತಮಾನದ ಪ್ರಾರಂಭದಲ್ಲಿ ಅತ್ಯಂತ ಹೀನವಾಗಿ, ಕ್ರೌರ್ಯದಿಂದ ನೋಡುವ ಪರಿಸ್ಥಿತಿ ಇತ್ತು. ಮಹಿಳೆಯನ್ನು ವ್ಯಕ್ತಿಯಾಗಿ ಕಾಣದೇ, ವಸ್ತುವಾಗಿ ನೋಡುತ್ತಿದ್ದರು. ಇಂತಹ ಕಷ್ಟದ ಸನ್ನಿವೇಶದಲ್ಲಿ ಮಹಿಳೆಯರಿಗೆ ಸಮಾನತೆ, ಧ್ವನಿಯನ್ನು ಕೊಟ್ಟವರು ಅಣ್ಣ ಬಸವಣ್ಣನವರು ಎಂದು ಮಾತನಾಡಿದರು. ಅನಾಥ ಶವಗಳಿಗೆ ಸಂಸ್ಕಾರ ಮಾಡುವ ಕಾಯಕದಲ್ಲಿ ನಿರತರಾದ ನಮಿತ್ತ ಆಶಾ ಸ್ವಾಮಿ, ಜಯಪುರ ರಾಮನಗರ ಜಿಲ್ಲೆ ಅವರನ್ನು ಸಂಮಾನಿಸಲಾಯಿತು. ಶಿವಾನುಭವದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ವಾರ್ಷಿಕೋತ್ಸವ ಆಚರಿಸಲಾಯಿತು. ಅಕ್ಕಮಹಾದೇವಿ ಯೋಗವಿಜ್ಞಾನ ಕೇಂದ್ರದ ಸದಸ್ಯರು ಯೋಗನೃತ್ಯ ಮಾಡಿದರು. ಜೆ.ಸಿ. ಪ್ರೌಢಶಾಲೆ ಗದಗ ವಿದ್ಯಾರ್ಥಿಗಳಿಂದ ಯೋಗ ಪ್ರದರ್ಶನ ನಡೆಯಿತು.

ಕು. ತನ್ವ ರಾಮಚಂದ್ರ ಮೋನೆ, ಗದಗ ಅವರು ವಚನಸಂಗೀತ ಹಾಡಿದರು. ಗುರುನಾಥ ಸುತಾರ ಮತ್ತು ಪ್ರಸಾದ ಸುತಾರ ಅವರು ತಬಲಾ ಮತ್ತು ಹಾರ್ಮೋನಿಯಮ್ ಸಾಥ್ ನೀಡಿದರು. ಧರ್ಮಗ್ರಂಥ ಪಠಣವನ್ನು ರೇಣುಕಾ ಅಮಾತ್ಯ, ವಚನ ಚಿಂತನೆಯನ್ನು ಜಯಶ್ರೀ ಉಗಲಾಟದ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಕೊಂಡಿದ್ದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಗದಗ ಅವರನ್ನು ಪೂಜ್ಯರು ಸಂಮಾನಿಸಿದರು.

ಧರ್ಮಗ್ರಂಥ ಪಠಣವನ್ನು ರೇಣುಕಾ ಅಮಾತ್ಯ, ವಚನ ಚಿಂತನೆಯನ್ನು ಜಯಶ್ರೀ ಉಗಲಾಟದ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಕೊಂಡಿದ್ದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಗದಗ ಅವರನ್ನು ಪೂಜ್ಯರು ಸಂಮಾನಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ. ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಲೂಗಲ್, ಶಿವಾನುಭವ ಸಮಿತಿ ಚೇರಮನ್‌ರಾದ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

### ರೇಣುಕಾಚಾರ್ಯ ಮಂದಿರದಲ್ಲಿ ರೇಣುಕಾಚಾರ್ಯ ಜಯಂತಿ–ಮಹಿಳಾ ಜಾಗೃತಿ

# ಜಾತ್ರೆಗಳು ಜಾಗೃತಿ ಮೂಡಿಸುವ ಕೇಂದ್ರಗಳಾಗಿವೆ : ಕವಿತಾ




ಗದಗ, ಮಾ. 23 : ಜಾತ್ರೆಗಳು ಜನರಲ್ಲಿ ಧಾರ್ಮಿಕ ಭಾವನೆಗಳನ್ನು ಜಾಗೃತಿ ಮೂಡುವದರೊಂದಿಗೆ ಮಾನವೀಯ, ಸಾಮಾಜಿಕ, ನೈತಿಕ, ಧಾರ್ಮಿಕ ಮೌಲ್ಯಗಳನ್ನು ಬಿತ್ತುವ ಜಾಗೃತಿ ಕೇಂದ್ರಗಳಾಗಿವೆ ಎಂದು ಸಾಹಿತಿ ಕವಿತಾ ದಂಡಿನ ಹೇಳಿದರು.ಅವರು ಗದುಗಿನ ಜ.ರೇಣುಕಾಚಾರ್ಯ ಮಂದಿರದಲ್ಲಿ ಜರುಗಿದ ರೇಣುಕಾಚಾರ್ಯ ಜಯಂತಿ ಹಾಗೂ ಜಾತ್ರಾ ಕಾರ್ಯಕ್ರಮದ ಮಹಿಳಾಗೋಷ್ಠಿಯಲ್ಲಿ ಮಹಿಳಾ ಜಾಗೃತಿ ವಿಷಯವಾಗಿ ಮಾತನಾಡಿದರು.

ಕುಟುಂಬದ ಸಂಪೂರ್ಣ ಹೊಣೆಗಾರಿಕೆಯನ್ನು ನಿಭಾಯಿಸಿ ಮನೆಯ ಒಳಗೂ ಹೊರಗೂ ದುಡಿಯುವ ಮಹಿಳೆಯ ಬದುಕಿಗೆ ಭದ್ರತೆಯೇ ಇಲ್ಲದಂತಾಗಿರುವದು ವಿಷಾದನೀಯ ಎಂದರು.

ಸಾನಿಧ್ಯ ವಹಿಸಿದ್ದ ಮಲ್ಲಸಮುದ್ರದ ಓಂಕಾರೇಶ್ವರ ಮಠದ ಷ.ಬ್ರ.ಫಕ್ಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ ಸ್ತ್ರೀಯರು ಶಕ್ತಿಯ ಸ್ವರೂಪ ತಾಳ್ಮೆ, ಸಹನೆಯಿಂದ ಮನೆಯನ್ನು ನಿಭಾಯಿಸಿ ಯಶಸ್ವಿಯಾಗಿದ್ದಾರೆ ಎಂದರು. ಮುಖ್ಯ ಅತಿಥಿಗಳಾಗಿ ಲಲಿತಾ ಬಾಳಿಹಳ್ಳಿಮಠ, ರಜನ ಪಾಟೀಲ, ನಾಗರತ್ನ ಹುಬಳೀಮಠ, ವಿಜಯಲಕ್ಷ್ಮೀ ಬಿರಾದಾರ, ಸಾವಿತ್ರಿ ಶಿಗ್ಲಿ, ಸುನಂದಾ ಜೋಬಾಳೆ ಆಗಮಿಸಿದ್ದರು. ವೇದಿಕೆಯ ಮೇಲೆ ಭಕ್ತಿಸೇವೆ ವಹಿಸಿದ್ದ ಗೌರಮ್ಮ ಶಾಬಾದಿಮಠ, ಪಾರ್ವತಿ ಶಾಬಾದಿಮಠ, ಜ್ಯೋತಿ ಚಳಗೇರಿ, ಗಿರಿಜಾ ಕಾಳಗಿ, ಗಿರಿಜಾದೇವಿ ಹಿರೇಮಠ, ಮಂಗಳಾ ಶಾಬಾದಿಮಠ, ಸರ್ವಮಂಗಳ ವೀರಲಿಂಗಯ್ಯನಮಠ ಉಪಸ್ಥಿತರಿದ್ದರು.

ಷ.ಬ್ರ.ರಾಜಶೇಖರ ಶಿವಾಚಾರ್ಯ ಸ್ವಾಮಿಗಳಿಂದ ರೇಣುಕ ದರ್ಶನ ಪ್ರವಚನ ಜರುಗಿತು. ಶ್ರೀಮತಿ ಪಾರ್ವತಿ ಮಾಳೇಕೊಪ್ಪಮಠ ಹಾಗೂ ಸಂಗಡಿಗರು ಪ್ರಾರ್ಥಿಸಿದರು, ಸಂಗಮ್ಮ ಹಿರೇಮಠ ಸ್ವಾಗತಿಸಿದರು, ಲತಾ ಮುತ್ತಿನಪೆಂಡಿಮಠ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ವ್ಹಿ.ಕೆ.ಗುರುಮಠ, ಮಂಜುನಾಥ ಬೇಲೇರಿ, ಚಂದ್ರು ಬಾಳಿಹಳ್ಳಿಮಠ, ಮಹೇಶ ಬೇಲೇರಿ, ಶಿದ್ಲಿಂಗಪ್ಪ ಚಳಗೇರಿ, ಸುರೇಶ ಅಬ್ಬಿಗೇರಿ, ಶಕುಂತಲಾ ಬೇಲೇರಿ, ಅನ್ನಪೂರ್ಣ ಗಡಾದ, ಮಂಗಲಾ ಬೇಲೇರಿ, ಶಶಿಕಲಾ ಲಕ್ಕನಗೌಡ್ರ, ಸುನಂದಾ ಮಾಳೇಕೊಪ್ಪಮಠ, ವೀರಭದ್ರಯ್ಯ ಧನ್ನೂರಹಿರೇಮಠ, ವ್ಹಿ.ಸಿ.ಅಬ್ಬಿಗೇರಿ ಮುಂತಾದವರಿದ್ದರು.

### ರೋಟರಿ ಸೆಂಟ್ರಲ್–ಇನ್ನರ್‌ವ್ಹೀಲ್ ಕ್ಲಬ್ ಮಿಡ್‌ಟೌನ್‌ದಿಂದ ಜಾಗತಿಕ ಜಲ ದಿನ

# ಮುಂದಿನ ಪೀಳಿಗೆಗಾಗಿ ನೀರನ್ನು ಉಳಿಸಿ : ವಿಜಯಕುಮಾರ




ಗದಗ, ಮಾ. 23 : ನೀರು ಜೀವ ಸಂಜೀವಿನಿ ನಮಗೆ ಲಭ್ಯವಿರುವ ನೀರನ್ನು ಅಗತ್ಯಕ್ಕೆ ಅನುಸಾರವಾಗಿ ಸಂರಕ್ಷಿಸಿ ಮಿತವ್ಯಯದಿಂದ ಬಳಸಿ ಮುಂದಿನ ಪೀಳಿಗೆಯ ಭವಿಷ್ಯಕ್ಕಾಗಿ ನೀರನ್ನು ಉಳಿಸುವುದೇ ನಮ್ಮ ಗುರಿಯಾಗಿರಲಿ ಎಂದು ಗದಗ–ಬೆಟಗೇರಿ ರೋಟರಿ ಸೆಂಟ್ರಲ್ ಕ್ಲಬ್ ಅಧ್ಯಕ್ಷ ವಿಜಯಕುಮಾರ ಹಿರೇಮಠ ಹೇಳಿದರು.

ಅವರು ಶುಕ್ರವಾರ ಗದಗ–ಬೆಟಗೇರಿ ರೋಟರಿ ಸೆಂಟ್ರಲ್ ಕ್ಲಬ್ ಹಾಗೂ ಇನ್ನರ್‌ವ್ಹೀಲ್ ಕ್ಲಬ್ ಮಿಡ್‌ಟೌನ್‌ದಿಂದ ಜರುಗಿದ ಜಾಗತಿಕ ಜಲ ದಿನ ಆಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಭೂಮಿಯ ಮೇಲಿನ ಪ್ರತಿಯೊಂದು ಜೀವಿಗೂ ನೀರು ಅತ್ಯವಶ್ಯ ಜೀವದ್ರವ ಎನಿಸಿರುವ ನೀರನ್ನು ಅತ್ಯಂತ ಪ್ರಜ್ಞಾಪೂರ್ವಕವಾಗಿ ಬಳಸಿ ಉಳಿಸಲು ನಾವೆಲ್ಲರೂ ಮುಂದಾಗಬೇಕು ಎಂದರು.

ಇನ್ನರ್‌ವ್ಹೀಲ್ ಮಿಡ್‌ಟೌನ್ ಅಧ್ಯಕ್ಷೆ ವಿಜಯಲಕ್ಷ್ಮೀ ಬಿರಾದಾರ ಮಾತನಾಡಿ ನೀರು ಅತ್ಯವಶ್ಯ ವಸ್ತುವಾಗಿದ್ದು ಅದರ ಮಹತ್ವತೆಯನ್ನು ಸಮುದಾಯಕ್ಕೆ ಕಲ್ಪಿಸಿ ಜನರಲ್ಲಿ ಜಾಗೃತಿ ಮಾಡಬೇಕಾಗಿರುವದು ಅತ್ಯವಶ್ಯವಾಗಿದೆ ಎಂದರು.ರೋಟರಿ ಸೆಂಟ್ರಲ್ ಮಾಜಿ ಅಧ್ಯಕ್ಷ ವ್ಹಿ.ಕೆ.ಗುರುಮಠ ಪ್ರಾಸ್ತಾವಿಕವಾಗಿ ಮಾತನಾಡಿ ನೀರಿನ ಮೌಲ್ಯ ಅತ್ಯಮೂಲ್ಯ ಈಗಲೇ ನಾವು ನೀರನ್ನು ಉಳಿಸಿಕೊಳ್ಳದಿದ್ದರೆ ಬರಲಿರುವ ದಿನಮಾನದಲ್ಲಿ ನೀರಿನ ಕೊರತೆಯಿಂದ ಜೀವ ಸಂಕುಲ ತತ್ತರಿಸಿ ಹೋಗಲಿದೆ ಎಂದರು.ಮಿಡ್‌ಟೌನ್‌ದ ಖಜಾಂಚಿ ರಾಣಿ ಚಂದಾವರಿ ಮಾತನಾಡಿ ಅತಿಯಾದ ಪರಿಸರ ಮಾಲಿನ ಹಾಗೂ ಜಲಸಂಪನ್ಮೂಲದ ಅಂತರ್‌ಜಲದ ಅನಗತ್ಯ ವ್ಯರ್ಥದಿಂದಾಗಿ ನೀರಿನ ಕೊರತೆ ಉಂಟಾಗುತ್ತದೆ ಎಂದರು.

ಗದಗ ಸೆಂಟ್ರಲ್ ರೋಟರಿ ಕಾರ್ಯದರ್ಶಿ ಸಂತೋಷ ತೋಟಗಂಟಿಮಠ ಸ್ವಾಗತಿಸಿದರು ಸಿ.ಜಿ.ಹಿರೇಗೌಡರ ವಂದಿಸಿದರುಯ. ಮಂಜುನಾಥ ಬೇಲೇರಿ, ಸುರೇಶ ಅಬ್ಬಿಗೇರಿ, ಸ್ನೇಹಾ ಹಿರೇಮಠ, ಗೌತಮ್ ಗಡ್ಡಿ, ಅನಿತಾ ತೋಟಗಂಟಿಮಠ, ನೇತ್ರಾ ಗಡ್ಡಿ ಮುಂತಾದವರಿದ್ದರು.

# ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದ ಉಪ ವಿಭಾಗಾಧಿಕಾರಿ ಸಪ್ತಶ್ರೀ



ತಿಪಟೂರು: ಜನಗಳಿಗೆ ಹಾಗೂ ಜಾನುವಾರುಗಳಿಗೆ ಕುಡಿಯಲು ನೀರು ಜಾನುವಾರುಗಳಿಗೆ ಮೇವಿನ ಸಮಸ್ಯೆ ಆಗದಂತೆ ಎಚ್ಚರಿಕೆ ವಹಿಸಬೇಕೆಂದು ಉಪ ವಿಭಾಗಾಧಿಕಾರಿ ಸಪ್ತ ಶ್ರೀ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಮಿನಿ ವಿಧಾನಸೌಧ ಕಚೇರಿಯಲ್ಲಿ ಕರೆದಿದ್ದ ತಾಲೂಕು ಮಠದ ಟ್ರಾಸ್ಕ್ ಫೋರ್ಸ್ ಸಮಿತಿ ಸಭೆದಲ್ಲಿ ಮಾತನಾಡಿದರು.

ಬೇಸಿಗೆ ಕಾಲದಲ್ಲಿ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ಪ್ರಾರಂಭವಾಗಿತ್ತಿರುವಾಗ ಯಾವ ರೀತಿ ಕರ್ತವ್ಯ ನಿರ್ವಹಿಸುತ್ತಿರಿ ಎಂದು ಕೇಳಿದಾಗ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಟ್ರಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಇಲಾಖೆಯಲ್ಲಿ ಹಣವಿಲ್ಲ ಬೋರ್‌ವೆಲ್ ಕೊರೆಯುತ್ತಿರುವರು ಬರುತ್ತಿಲ್ಲ ನಾವೇನು ಮಾಡಲು ಸಾಧ್ಯವಿಲ್ಲ ಎಂದು ಏರು ಧ್ವನಿಯಲ್ಲಿ ಮಾತನಾಡಿದ್ದಾಗ ಉಡಾಫೆ ಉತ್ತರ ನೀಡುತ್ತೀರಾ ಎಂದು ಉಪವಿಭಾಧಿಕಾರಿಗಳು ಗರಂ ಆದರು.

ಸೂಕ್ಷ್ಮ ಪರಿಸ್ಥಿತಿಯಲ್ಲಿ ಕರ್ತವ್ಯ ನಿರ್ವಹಿಸದೆ ಕಾಲಹರಣ ಮಾಡುವ ಅಧಿಕಾರಿಗಳಿಗೆ ಕ್ರಮವನ್ನು ತೆಗೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಹಾಗೂ ಸಿಇಒ ಅವರಿಗೆ ಶಿಸ್ತು ಕ್ರಮ ಆದೇಶ ಮಾಡಲಾಗುವುದು ಎಂದರು . ಚುನಾವಣಾ ಕೆಲಸವಿದೆ ಎಂದು ನೆಪ ಹೇಳಿಕೊಂಡು ಜನ ಜಾನುವಾರುಗಳಿಗೆ ನೀರಿನ ಸಮಸ್ಯೆ ಹೆಚ್ಚಾಗುವಂತೆ ಮಾಡಕೂಡದು. ಚುನಾವಣೆಯಷ್ಟೇ ಮುಖ್ಯ ಬರಗಾಲದ ಸಮಸ್ಯೆಯೂ ಆಗಿರುವುದರಿಂದ ಎಲ್ಲಾ ಅಧಿಕಾರಿಗಳು ಬರಗಾಲದಿಂದ ಉಂಟಾಗಿರುವ ಸಮಸ್ಯೆಗಳಿಗೆ ಆದ್ಯತೆ ನೀಡಿ ಕೆಲಸ ಮಾಡಬೇಕು ಇನ್ನು ಯಾವುದೇ ರೀತಿಯ ಸಮಸ್ಯೆ ಇದ್ದರೆ ನನ್ನ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದರು.

### ಲೋಕಸಭೆ ಸಾರ್ವತ್ರಿಕ ಚುನಾವಣೆ–2024

# ರಾಜಕೀಯ ಪಕ್ಷ ಪ್ರತಿನಿಧಿಗಳ ಸಮ್ಮುಖದಲ್ಲಿ ಇವಿಎಂ, ವಿ.ವಿ.ಪ್ಯಾಟ್ಸ್‌ಗಳ 1 ನೇ ಹಂತದ ರ್ಯಾಂಡಮೈಜೇಷನ್



ಧಾರವಾಡ ಮಾರ್ಚ್. ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆ 2024 ಕ್ಕೆ ಸಂಬಂದಿಸಿದಂತೆ ಇ.ವಿ.ಎಂ. ಮತ್ತು ವಿ.ವಿ.ಪ್ಯಾಟ್ಸ್‌ಗಳ 1 ನೇಯ ಹಂತದ ರ್ಯಾಂಡಮೈಜೇಷನ್ ಕಾರ್ಯವನ್ನು ತಂತ್ರಾಂಶದ ಮೂಲಕ ರಾಷ್ಟ್ರೀಯ ರಾಜಕೀಯ ಪಕ್ಷಗಳ ಹಾಗೂ ಇತರ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಇಂದು (ಮಾ.21) ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳಾದ ದಿವ್ಯ ಪ್ರಭು ಅವರು ಜರುಗಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲಾ ಚುನಾವಣಾಧಿಕಾರಿಗಳು ಇವಿಎಂ, ವಿ.ವಿ.ಪ್ಯಾಟ್ಸ್‌ಗಳ ರ್ಯಾಂಡಮೈಜೇಷನ್ ಕುರಿತು, ಮತದಾರ ಪಟ್ಟಿ, ಮತಗಟ್ಟೆಗಳ ಕುರಿತು, ಪ್ರಚಾರ ಸಂದರ್ಭದಲ್ಲಿ ಅನುಸರಿಸುವ ನಿಯಮಗಳ ಕುರಿತು ಅವರು ವಿವರಿಸಿದರು. ಸಭೆಯಲ್ಲಿ ಭಾರತೀಯ ಜನತಾ ಪಕ್ಷದ ಆರ್.ಎಂ.ಕಲ್ಯಾಣಶೆಟ್ಟಿ, ಭಾರತೀಯ ರಾಷ್ಟ್ರೀಯ ಕಾಂಗ್ರಸ್ ಪಕ್ಷದ ಪ್ರಕಾಶ ಹಳಿಯಾಳ, ಜಾತ್ಯಾತೀತ ಜನತಾದಳ ಪಕ್ಷದ ಗುರುರಾಜ ಹುಣಸಿಮರದ ಮತ್ತು ದೇವರಾಜ ಕಂಬಳಿ, ಆಮ್ ಆದ್ಮಿ ಪಕ್ಷದ ಅವಿನಾಶ, ಬಹುಜನ ಸಮಾಜವಾದಿ ಪಕ್ಷ ಶೋಭಾ ಬಳ್ಳಾರಿ ಸೇರಿದಂತೆ ವಿವಿಧ ರಾಜಕೀಯ ಪಕ್ಷ ಪ್ರತಿನಿಧಿಗಳು, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯ ಎಲ್ಲ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ನೋಡಲ್ ಅಧಿಕಾರಿಗಳು ಭಾಗವಹಿಸಿದ್ದರು.